ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಹೌದು

ಆ) ರಸ್ತೆಯನ್ನು ಮೇಲ್ದರ್ಜೆಗೇರಿಸಿದ ನಂತರ ಹಸ್ತಾಂತರಿಸಿ ಕೊಳ್ಳಲಾಗುವುದು

ಇ) ಮೇಲ್ದರ್ಜೇಗೇರಿಸುವ ವಿಷಯ ಸರ್ಕಾರದ ಪರಿಶೀಲನೆ ಯಲ್ಲಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

451 (507) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ರಚನೆ ಕಾರ್ಯವು ವಿಳಂಬ ವಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಶೀಘ್ರ ರಚನೆಗಾಗಿ ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಹೌದು

ಆ) ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ರಚನೆಯ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ

452 (508) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ವಿದ್ಯುತ್ ಸ್ವೀಕರಣ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ,

ಆ) ವಿದ್ಯುತ್ ಸ್ವೀಕರಣ ಕೇಂದ್ರ ಸ್ಥಾಪಿಸಲು ಜಮೀನುಗಳನ್ನು ಖರೀದಿ ಮಾಡುವ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಹಾಗಿದ್ದಲ್ಲಿ ತ್ವರಿತವಾಗಿ ಜಮೀನು ಖರೀದಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಬೆಳಗಾವಿ ಜಿಲ್ಲೆಯಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು 110 ಕೆವಿಯ 21 ಮತ್ತು 220 ಕೆವಿಯ 4 ಒಟ್ಟು 25 ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲು ನಿರ್ಧರಿಸಿದೆ

ಅಲ್ಲದೇ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯು ಬೆಳಗಾವಿ ಜಿಲ್ಲೆಯಲ್ಲಿ 33 ಕೆವಿಯ 29 ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲು ನಿರ್ಧರಿಸಿದೆ

ಆ) ಮುಖ್ಯವಾಗಿ 110 ಕೆವಿಯ 6 ವಿದ್ಯುತ್ ಉಪ ಕೇಂದ್ರಗಳು ಮತ್ತು 220 ಕೆವಿಯ 3 ವಿದ್ಯುತ್ ಉಪ ಕೇಂದ್ರಗಳ ಜಮೀನುಗಳನ್ನು ಖರೀದಿಸುವಲ್ಲಿ ವಿಳಂಬ ಉಂಟಾಗುತ್ತಿರುವುದು ಗಮನಕ್ಕೆ ಬಂದಿರುತ್ತದೆ

ಇ) 110 ಕೆವಿಯ 6 ವಿದ್ಯುತ್ ಉಪ–ಕೇಂದ್ರಗಳು ಮತ್ತು 220 ಕೆವಿಯ 2 ವಿದ್ಯುತ್ ಉಪ ಕೇಂದ್ರಗಳ ಸ್ಥಾಪನೆಗೆ ಬೇಕಾಗುವ ಜಮೀನನ್ನು ಖಾಸಗಿಯವರಿಂದ ನೇರವಾಗಿ ಖರೀದಿಸಲು ಬೆಳಗಾವಿ ಜಿಲ್ಲಾಧಿಕಾರಿಯವರ ನೇತೃತ್ವದ ಭೂ ಬೆಲೆ ನಿಗದೀಕರಣ ಸಮಿತಿಯು ಭೂಮಿ ಬೆಲೆಯನ್ನು ಅಂತಿಮಗೊಳಿಸಿದ್ದು ಬೆಳಗಾವಿಯ ಜಿಲ್ಲಾಧಿಕಾರಿಯವರು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಮೂರ್ವಾನುಮತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ ಪೂರ್ವಾನುಮತಿಯನ್ನು ನಿರೀಕ್ಷಿಸಲಾಗಿದೆ

220 ಕೆವಿಯ ಇನ್ನೊಂದು ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸಲು ಗುರುತಿಸಲಾಗಿರುವ ಭೂಮಿಯು ಕೃಷಿ ಇಲಾಖೆಗೆ ಸೇರಿದ್ದು, ಭೂಮಿಯನ್ನು ಕವಿಪ್ರನಿನಿಗೆ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಕೃಷಿ ಇಲಾಖೆಯ ಆಯುಕ್ತರು ಸಲ್ಲಿಸಿರುತ್ತಾರೆ ಕವಿಪ್ರನಿನಿಯ ಕೃಷಿ ಇಲಾಖೆಯು ನಿಗದಿಪಡಿಸುವ ಬೆಲೆಯಲ್ಲಿ ಭೂಮಿಯನ್ನು ಖರೀದಿಸಲು ಒಪ್ಪಿರುತ್ತದೆ ಕೃಷಿ ಇಲಾಖೆಯ ಮಂಜೂರಾತಿಯನ್ನು ನಿರೀಕ್ಷಿಸಲಾಗಿದೆ

453 (509) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಮತ ಕ್ಷೇತ್ರದಲ್ಲಿರುವ ಸ್ತ್ರೀಶಕ್ತಿ ಗುಂಪುಗಳು ಯಾವುವು,